## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಗಂಗಾ ಕಲ್ಯಾಣ ಯೋಜನೆಯ ಕೊಳವೆಬಾವಿಗಳೂ ಸೇರಿದಂತೆ ಹೊಸದಾಗಿ ನೋಂದಣಿಗೊಳ್ಳುವ ನೀರಾವರಿ ಪಂಪ್‌ಸೆಟ್‌ಗಳಿಗೆ 4 or 5 star rated ಪಂಪ್‌ಗಳನ್ನು ಅಳವಡಿಸುವ ಬಗ್ಗೆ

ಓದಲಾಗಿದೆ :- ಸುತ್ತೋಲೆ ಸಂಖ್ಯೆ ಇಎನ್ 11 ವಿಎಸ್‌ಸಿ 2016 ದಿನಾಂಕ : 20-01-2016

ಪ್ರಸ್ತಾವನೆ :-

1. ರಾಜ್ಯದಲ್ಲಿ ಪ್ರತಿ ವರ್ಷ ಸುಮಾರು 1 ಲಕ್ಷ ನೀರಾವರಿ ಪಂಪ್‌ಸೆಟ್‌ಗಳು ವಿದ್ಯುತ್ ಜಾಲಕ್ಕೆ ಸೇರ್ಪಡೆಗೊಳ್ಳುತ್ತಿದ್ದು, ಪಂಪ್‌ಸೆಟ್‌ಗಳ ಸೇರ್ಪಡೆಯು ಒಂದು ನಿರಂತರ ಪ್ರಕ್ರಿಯೆಯಾಗಿದೆ. ಪ್ರಸ್ತುತ, ರಾಜ್ಯದಲ್ಲಿ ಸುಮಾರು 24 ಲಕ್ಷ ನೀರಾವರಿ ಪಂಪ್‌ಸೆಟ್‌ಗಳಿದ್ದು, ಪ್ರತಿನಿತ್ಯ ಬಳಕೆಯಾಗುತ್ತಿರುವ ವಿದ್ಯುಚ್ಛಕ್ತಿ ಪ್ರಮಾಣದಲ್ಲಿ ಶೇಕಡಾ 38 ರಷ್ಟು ವಿದ್ಯುತ್ ಪ್ರಮಾಣವು ನೀರಾವರಿ ಪಂಪ್‌ಸೆಟ್‌ಗಳಿಗೆ ಬಳಕೆಯಾಗುತ್ತಿದೆ.
2. ರಾಜ್ಯದಲ್ಲಿ ಬಹುತೇಕ ರೈತರು ವೈಜ್ಞಾನಿಕ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳದೆ ಕೃಷಿ ಚಟುವಟಿಕೆಗಳನ್ನು ಮುಂದುವರೆಸುತ್ತಿರುವುದರಿಂದ ಹೆಚ್ಚು ಪ್ರಮಾಣದ ವಿದ್ಯುತ್ ಬಳಕೆಯಾಗುತ್ತಿದೆ. ಕೃಷಿ ಕ್ಷೇತ್ರದಲ್ಲಿ ಆಧುನಿಕ ವಿಧಾನಗಳನ್ನು ಅಳವಡಿಸುವ ಅವಶ್ಯಕತೆಯಿರುತ್ತದೆ. ಈ ನಿಟ್ಟಿನಲ್ಲಿ, ರೈತರು ಸಾಂಪ್ರದಾಯಿಕ ನೀರಾವರಿ ಪಂಪ್‌ಸೆಟ್‌ಗಳ ಬದಲಿಗೆ ಹೆಚ್ಚಿನ ಕಾರ್ಯಕ್ಷಮತೆಯುಳ್ಳ ಪಂಪ್‌ಗಳನ್ನು ಬಳಸಿದಲ್ಲಿ, ಪಂಪ್‌ಗಳ ವಿದ್ಯುಚ್ಛಕ್ತಿ ಬಳಕೆ ಪ್ರಮಾಣವು ಕಡಿಮೆಯಾಗಲಿದೆ.
3. ರೈತರ ನೀರಾವರಿ ಪಂಪ್‌ಸೆಟ್‌ಗಳಿಗೆ ಹೆಚ್ಚಿನ ಕಾರ್ಯಕ್ಷಮತೆಯುಳ್ಳ (Energy Efficient) ಪಂಪ್‌ಗಳನ್ನು ಬಳಸಿದಲ್ಲಿ, ಶೇಕಡಾ 30 ರಷ್ಟು ವಿದ್ಯುಚ್ಛಕ್ತಿ ಉಳಿತಾಯವಾಗುವುದನ್ನು ವಿದ್ಯುತ್ ಸರಬರಾಜು ಕಂಪನಿಗಳು ಈಗಾಗಲೇ ಮಾದರಿ ಯೋಜನೆಗಳನ್ನು ಜಾರಿಗೊಳಿಸುವ ಮುಖಾಂತರ ಖಾತ್ರಿಪಡಿಸಿಕೊಂಡಿರುತ್ತವೆ.
4. ಹೊಸದಾಗಿ ನೋಂದಣಿಗೊಳ್ಳುವ ನೀರಾವರಿ ಪಂಪ್‌ಸೆಟ್‌ಗಳಿಗೆ ವಿದ್ಯುತ್ ಸಂಪರ್ಕ ಪಡೆಯಲು ಹೆಚ್ಚಿನ ಕಾರ್ಯಕ್ಷಮತೆಯುಳ್ಳ (Energy Efficient) 4 or 5 star rated ಪಂಪ್‌ಗಳನ್ನೇ ಅಳವಡಿಸಿದಲ್ಲಿ ವಿದ್ಯುತ್ ಉಳಿತಾಯವಾಗುವುದರ ಜೊತೆಗೆ ವಿದ್ಯುತ್ ಜಾಲದ ಮೇಲೆ ಹೊರೆ ಕಡಿಮೆಯಾಗಲಿದೆ.

ಈ ಹಿನ್ನೆಲೆಯಲ್ಲಿ ಕೆಳಕಂಡ ಆದೇಶ ಹೊರಡಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ ಇಎನ್ 103 ವಿಎಸ್‌ಸಿ 2017, ಬೆಂಗಳೂರು, ದಿನಾಂಕ:19-05-2017**

**ದಿನಾಂಕ 01-06-2017 ರಿಂದ ಜಾರಿಗೆ ಬರುವಂತೆ ಹೊಸದಾಗಿ ವಿದ್ಯುತ್ ಸಂಪರ್ಕ ಪಡೆಯಲು ನೋಂದಣಿಗೊಳ್ಳುವ, (ಗಂಗಾ ಕಲ್ಯಾಣ ಯೋಜನೆಯ ಕೊಳವೆಬಾವಿಗಳೂ ಸೇರಿದಂತೆ) ಎಲ್ಲಾ ನೀರಾವರಿ ಪಂಪ್‌ಸೆಟ್‌ಗಳಿಗೆ, ಕಡ್ಡಾಯವಾಗಿ ಹೆಚ್ಚಿನ ಕಾರ್ಯಕ್ಷಮತೆಯುಳ್ಳ (Energy Efficient) 4 or 5 star rated ಪಂಪ್‌ಗಳನ್ನೇ ಅಳವಡಿಸುವುದು ಮತ್ತು ವಿದ್ಯುತ್ ಸಂಪರ್ಕ ಪಡೆಯುವಾಗ ಅರ್ಜಿದಾರರು ಈ ಬಗ್ಗೆ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ನೀಡಬೇಕೆಂದು ಆದೇಶಿಸಲಾಗಿದೆ.**

**ಈ ಆದೇಶವು ದಿನಾಂಕ 1-6-2017ರಿಂದ ಜಾರಿಗೆ ಬರಲಿದೆ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ
ಇಂಧನ ಇಲಾಖೆ

ಇವರಿಗೆ :- ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಕರ್ನಾಟಕ ರಾಜ್ಯಪತ್ರ ಪ್ರಕಟಣೆಗಾಗಿ.

ಪ್ರತಿ:- 1. ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು – ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಲಾಗಿದೆ.

2. ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು. – ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಲಾಗಿದೆ.
3. ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, 2ನೇ ಮಹಡಿ, ವಿಕಾಸ ಸೌಧ, ಬೆಂಗಳೂರು – ಸಂಬಂಧಪಟ್ಟ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಕೋರಲಾಗಿದೆ.
4. ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ, ಮೈಸೂರು.
7. ವ್ಯವಸ್ಥಾಪಕ ನಿರ್ದೇಶಕರು, ಮಂಗಳೂರು ವಿದ್ಯುತ್ ಸರಬರಾಜು ಕಂಪನಿ, ಮಂಗಳೂರು.
8. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ.
9. ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರ್ಗಿ.
10. ವ್ಯವಸ್ಥಾಪಕ ನಿರ್ದೇಶಕರು, ಹುಕ್ಕೇರಿ ಗ್ರಾ.ವಿ.ಅ.ಸ.ಸಂ.
11. ಕಾರ್ಯದರ್ಶಿಗಳು, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗ, ಎಂ.ಜಿ. ರಸ್ತೆ ಬೆಂಗಳೂರು.
12. ನಿರ್ದೇಶಕರು (ತಾಂತ್ರಿಕ), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು
13. ಮಾನ್ಯ ಇಂಧನ ಸಚಿವರ ವಿಶೇಷಾಧಿಕಾರಿಗಳು, ವಿಧಾನ ಸೌಧ, ಬೆಂಗಳೂರು
14. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
15. ನಿರ್ದೇಶಕರು (ಆರ್ಥಿಕ) /ಜಂಟಿ ನಿರ್ದೇಶಕರು (ಯೋಜನೆ/ಇ.ಎಂ.ಸಿ–2 &3), ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
16. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಹಿರಿಯ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
17. ಸರ್ಕಾರದ ಕಾರ್ಯದರ್ಶಿ (ವೆಚ್ಚ) ರವರ ಆಪ್ತ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
18. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ, ವಿಕಾಸ ಸೌಧ, ಬೆಂಗಳೂರು.
19. ಶಾಖಾ ರಕ್ಷಾ ಕಡತ/ಕಛೇರಿ ಪ್ರತಿ/ಹೆಚ್ಚುವರಿ ಪ್ರತಿಗಳು.